ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.
ಸಿ.ಸಿ.1418/2021

| | | | |
|---|---|---|---|
| ಸಾಕ್ಷಿದಾರರ ಹೆಸರು | : | ವಿನುತ್ ಹೆಚ್.ಆರ್. | ಪಿ.ಡಬ್ಲ್ಯೂ.8 |
| ತಂದೆಯ ಹೆಸರು | : | ರಾಜಶೇಖರ ಸಿದ್ದಪ್ಪ | ಸಿ.ಡಬ್ಲ್ಯೂ.17 |
| ವಯಸ್ಸು | : | 36 ವರ್ಷ | |
| ವೃತ್ತಿ | : | ಪಿ.ಎಸ್.ಐ, ರಾಜ್ಯಗುಪ್ತವಾರ್ತೆ, ದಾವಣಗೆರೆ ವಿಭಾಗ | |
| ವಾಸ | : | ದಾವಣಗೆರೆ | |

ದಿನಾಂಕಃ 22-07-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-

ನಾನು ನವೆಂಬರ್ 2019 ರಿಂದ ಜೂನ್ 2020 ರವರೆಗೂ ಬಸವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ನಂತರ ಡಿಸೆಂಬರ್ 2020 ರಿಂದ ಮಾರ್ಚ್ 2021 ರವರೆಗೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ04.01.2021 ರಂದು ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ತೇಜಸ್ವಿ ಪಿ.ಎಸ್.ಐ ರವರಿಂದ ಪಡೆದುಕೊಂಡು ಪರಿಶೀಲಿಸಿರುತ್ತೇನೆ. ದಿಃ09.01.2021 ರಂದು ಚಾಸಾ-12 ರವರ ಹೇಳಿಕೆ ಪಡೆದಿರುತ್ತೇನೆ. ಅದೇ ದಿನ 2 ನೇ ಆರೋಪಿ ಇಬ್ಬು ಜಾಮೀನು ಪಡೆದುಕೊಂಡು ಠಾಣೆಗೆ ಹಾಜರಾದ ಮೇರೆಗೆ ಜಾಮೀನು ಪ್ರಕ್ರಿಯೆ ನಡೆಸಿ ಆರೋಪಿ ಸ್ವಇಚ್ಛಾ ಹೇಳಿಕೆ

ಪಡೆದಿರುತ್ತೇನೆ. ಆರೋಪಿ ಸ್ವಇಚ್ಛಾ ಹೇಳಿಕೆ ನೋಡುತ್ತಿದ್ದು ಅದನ್ನು ನಿಪಿ-23 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-23(ಎ) ಇರುತ್ತದೆ. ಆರೋಪಿಯ ಸಹಿಯನ್ನು ಗುರುತಿಸಿದ್ದು ನಿಪಿ-23(ಬಿ) ಎಂದು ಗುರುತಿಸಲಾಯಿತು. ದಿಃ22.01.2021 ರಂದು FSL Report ಅನ್ನು ಪಡೆದಿರುತ್ತೇನೆ. FSL Report ಅನ್ನು ಡಿ.ವೈ.ಎಸ್.ಪಿ ಕಛೇರಿಯಲ್ಲಿ ಪಡೆದುಕೊಂಡು ಅವರು ನನಗೆ ಕಳುಹಿಸಿಕೊಟ್ಟಿರುತ್ತಾರೆ. FSL Report ಅನ್ನು ನಿಪಿ-24 ಎಂದು ಗುರುತಿಸಲಾಯಿತು. ನಂತರ ಆರೋಪಿತರ ವಿರುದ್ಧ ತನಿಖೆಯನ್ನು ಪೂರ್ಣಗೊಳಿಸಿ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. 2 ನೇ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. (ಈ ದಿನ 2 ನೇ ಆರೋಪಿಯು ನ್ಯಾಯಾಲಯದ ಮುಂದೆ ಗೈರು ಹಾಜರಿದ್ದು ಆತನನ್ನು ಗುರುತಿಸುವಲ್ಲಿ ತಮ್ಮ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ).

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ-</u>

ನಾನು ಕಡತವನ್ನು ಪಡೆದುಕೊಂಡು ಪರಿಶೀಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ದಿನ ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿ ಹಾಗೂ ಕಡತದಲ್ಲಿ ಇರುವ ಆರೋಪಿತರ ಭಾವಚಿತ್ರದಲ್ಲಿ ಇರುವ 1 ನೇ ಆರೋಪಿಯ ಭಾವಚಿತ್ರ ಹೊಂದಾಣಿಕೆ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ-10 ರವರ ಹೇಳಿಕೆಯನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ನಾನು 2 ನೇ ಆರೋಪಿಯ ಸ್ವಇಚ್ಛಾ ಹೇಳಿಕೆ ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ನಾನು

C.C.No.1418/2021
PW-8 CW-17

ಎಫ್.ಎಸ್.ಎಲ್ ವರದಿ ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಷಯಗಳು ಸುಳ್ಳು ಇರುತ್ತದೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪನ್ನು ಮಾಡದೇ ಇದ್ದರೂ ಅವರ ವಿರುದ್ಧ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಓಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್‌ಆರ್ಃ